**ನಿರ್ದೇಶಕರ ಕಛೇರಿ**
ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ

ಕರ್ನಾಟಕ ಸರ್ಕಾರ

ದೂರವಾಣಿ:080- 22864212.
ಫ್ಯಾಕ್ಸ್: 080-22863618.
Web: www.gokdom.com
20ನೇ ಮಹಡಿ, ವಿ.ವಿ ಗೋಪುರ,
ಡಾ॥ ಅಂಬೇಡ್ಕರ್ ವೀಧಿ, ಬೆಂಗಳೂರು 560001.

---

**ಸಂಖ್ಯೆ-: ಅಸಂನಿ/ವಿ.ವೇ/ಡಿಬಿ/ಸಿ.ಆರ್-04/2021-22** **ದಿನಾಂಕ:-16.09.2021**

ಗೆ, **ಜರೂರು**

ಜಿಲ್ಲಾ ಅಧಿಕಾರಿಗಳು
ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ
---ಎಲ್ಲಾ-------------- ಜಿಲ್ಲೆ

**ವಿಷಯ:-** ಕರ್ನಾಟಕ ರಾಜ್ಯದ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ 2021-22 ನೇ ಸಾಲಿನ ರಾಷ್ಟ್ರ ವಿದ್ಯಾರ್ಥಿವೇತನ ಪೋರ್ಟಲ್ (National Scholarship Portal-NSP) ನಲ್ಲಿ ಮೆಟ್ರಿಕ್-ಪೂರ್ವ, ಮೆಟ್ರಿಕ್-ನಂತರ ಮತ್ತು ಮೆರಿಟ್-ಕಮ್-ಮೀನ್ಸ್ ವಿದ್ಯಾರ್ಥಿವೇತನದ ಅರ್ಜಿಗಳನ್ನು ಸಲ್ಲಿಸುವ ಮತ್ತು ಈ ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ಪರಿಶೀಲಿಸುವ ಬಗ್ಗೆ.

*****

ಉಲ್ಲೇಖಿತ ವಿಷಯಕ್ಕೆ ಸಂಬಂಧಿಸಿದಂತೆ, ಭಾರತ ಸರ್ಕಾರ ವಿಧಿಸಿರುವ ನಿಯಮದಂತೆ ಅಲ್ಪಸಂಖ್ಯಾತರ ನಿರ್ದೇಶನಾಲಯದಿಂದ 2021-22 ನೇ ಸಾಲಿನ ರಾಷ್ಟ್ರ ವಿದ್ಯಾರ್ಥಿವೇತನ ಪೋರ್ಟಲ್ (National Scholarship Portal-NSP) ನ ಮೆಟ್ರಿಕ್-ಪೂರ್ವ, ಮೆಟ್ರಿಕ್-ನಂತರ ಮತ್ತು ಮೆರಿಟ್-ಕಮ್-ಮೀನ್ಸ್ ವಿದ್ಯಾರ್ಥಿವೇತನದ ಅರ್ಜಿಗಳನ್ನು ಆನ್‌ಲೈನ್ ಮೂಲಕ ಸಲ್ಲಿಸುವ ವಿಧಾನ ಮತ್ತು ಕೊನೆಯ ದಿನಾಂಕವನ್ನು ದಿನಪತ್ರಿಕೆಗಳಲ್ಲಿ ಮತ್ತು ಅಲ್ಪಸಂಖ್ಯಾತರ ನಿರ್ದೇಶನಾಲಯದ ವೆಬ್‌ಸೈಟ್‌ನಲ್ಲಿ ದಿನಾಂಕ:-15.09.2021 ರಂದು ಹೊರಡಿಸಲಾಗಿದೆ.ಪ್ರಕಟನೆಯ ಪ್ರತಿಯನ್ನು ಪತ್ರದೊಂದಿಗೆ ಲಗ್ಗತ್ತಿಸಲಾಗಿದೆ.

ಜಿಲ್ಲಾ ಅಲ್ಪಸಂಖ್ಯಾತ ಅಧಿಕಾರಿಗಳು ಆನ್‌ಲೈನ್ ಅರ್ಜಿಗಳ ಕುರಿತು ಈ ಕೆಳಗೆ ನಮೂದಿಸಿರುವಂತೆ ಕ್ರಮ ಕೈಕೊಳ್ಳಲು ಆದೇಶಿಸಲಾಗಿದೆ.

1. ಈ ಯೋಜನೆಯ ಬಗ್ಗೆ ತಮ್ಮ ಜಿಲ್ಲೆಯಲ್ಲಿ ಸಾರ್ವಜನಿಕರ/ವಿದ್ಯಾರ್ಥಿಗಳು/ಕಾಲೇಜು/ಶಿಕ್ಷಣ ಸಂಸ್ಥೆಗಳಿಗೆ ಅರಿವು ಮೂಡಿಸಲು ಸೂಕ್ತ ಕ್ರಮ ವಹಿಸುವುದು.
2. ಆನ್‌ಲೈನ್ ಅರ್ಜಿಗಳನ್ನು ಕಾಲೇಜು/ಶಿಕ್ಷಣ ಸಂಸ್ಥೆಗಳಲ್ಲಿ ಪರಿಶೀಲಿಸುವ ವಿಧಾನವನ್ನು ಈ ಪತ್ರದೊಂದಿಗೆ ಲಗ್ಗತ್ತಿಸಿದೆ ಹಾಗೂ ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ.ಈ ಬಗ್ಗೆ ಕಾಲೇಜು/ಶಿಕ್ಷಣ ಸಂಸ್ಥೆಗಳಿಗೆ ಮಾಹಿತಿ ನೀಡುವುದು.(ಅನುಬಂಧ –ಅ)
3. ಕಾಲೇಜು/ಶಿಕ್ಷಣ ಸಂಸ್ಥೆಗಳು ಆನ್‌ಲೈನ್ ಮೂಲಕ KYC ನೋಂದಣಿ ಮಾಡುಕೊಳ್ಳುವಂತೆ ತಿಳಿಸುವುದು.ಇದರ ವಿಧಾನ ಮತ್ತು USER MANUAL ಅನ್ನು ಅಲ್ಪಸಂಖ್ಯಾತರ ಇಲಾಖೆಯ ಹಾಗೂ ರಾಷ್ಟ್ರ ವಿದ್ಯಾರ್ಥಿವೇತನ ಪೋರ್ಟಲ್ (National Scholarship Portal-NSP) ನ ಜಾಲತಾಣದಲ್ಲಿ ಲಭ್ಯವಿದೆ ಮತ್ತು ಈ ಪತ್ರದೊಂದಿಗೆ ಲಗ್ಗತ್ತಿಸಿಲಾಗಿದೆ. (ಅನುಬಂಧ ಆ ಮತ್ತು ಇ)
4. ತಮ್ಮ ಜಿಲ್ಲೆಯ ಅಲ್ಪಸಂಖ್ಯಾತರ ಜಿಲ್ಲಾ ಹಾಗೂ ತಾಲೂಕು ಮಾಹಿತಿ ಕೇಂದ್ರಗಳಲ್ಲಿರುವ ಹೆಲ್ಪ್ ಡೆಸ್ಕ್ (Help Desk) ಮತು ಸಹಾಯವಾಣಿಯ ಮೂಲಕ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನದ ಅರ್ಜಿ ಸಲ್ಲಿಸುವ ಪ್ರಕ್ರಿಯೆಯ ಬಗ್ಗೆ ಮಾಹಿತಿ ನೀಡುವುದು ಮತ್ತು ಈ ಕುರಿತಾದ ತಾಂತ್ರಿಕ ತೊಂದರೆಗಳನ್ನು ಪರಿಹರಿಸುವುದು.

**ಹೆಚ್ಚಿನ ಮಾಹಿತಿಗಾಗಿ ಮತ್ತು ತಾಂತ್ರಿಕ ತೊಂದರೆಗಳು ಇದ್ದಲ್ಲಿ ಅಲ್ಪಸಂಖ್ಯಾತರ ನಿರ್ದೇಶನಾಲಯವನ್ನು ಸಂಪರ್ಕಿಸುವುದು.**

16/9/21

ನಿರ್ದೇಶಕರು
ಅಲ್ಪಸಂಖ್ಯಾತರ ನಿರ್ದೇಶನಾಲಯ
ಬೆಂಗಳೂರು